# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 122(924) |
| ಸದಸ್ಯರ ಹೆಸರು | : | ಶ್ರೀ ಪಿ.ಹೆಚ್.ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 14-07-2023 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆಗಳು | ಉತ್ತರ |
|---|---|---|
| (ಅ) | ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರುಗಳಿಗೆ, ಉಪಾಧ್ಯಕ್ಷರುಗಳಿಗೆ ಹಾಗೂ ಸದಸ್ಯರುಗಳಿಗೆ ನೀಡುತ್ತಿದ್ದ ಮಾಸಿಕ ಗೌರವಧನವನ್ನು ದಿನಾಂಕ:18.12.2022ರಂದು ಪರಿಷ್ಕರಿಸಿ ಅಧ್ಯಕ್ಷರಿಗೆ ರೂ.6000/- ಉಪಾಧ್ಯಕ್ಷರಿಗೆ ರೂ.4000/- ಹಾಗೂ ಸದಸ್ಯರಿಗೆ 2000/-ರೂಗಳ ಗೌರವಧನ ನೀಡುವಂತೆ ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 126 ಜಿಪಸ 2022ರ ದಿನಾಂಕ:18.12.2022ರ ಆದೇಶದಲ್ಲಿ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರಿಗೆ ರೂ. 3000/- ದಿಂದ 6000/-, ಉಪಾಧ್ಯಕ್ಷರಿಗೆ ರೂ.2000/- ದಿಂದ 4000/- ಹಾಗೂ ಸದಸ್ಯರಿಗೆ 1000/- ದಿಂದ 2000/-ರೂಗಳ ಗೌರವಧನವನ್ನು ಹೆಚ್ಚಿಸಲಾಗಿದೆ. (ಪ್ರತಿ ಲಗತ್ತಿಸಿದೆ) |
| (ಆ) | ಹಾಗಿದ್ದಲ್ಲಿ, ಆ ಹಣವನ್ನು ಇಲ್ಲಿಯವರೆಗೆ ನೀಡದೇ ಇರಲು ಕಾರಣವೇನು; (ವಿವರ ನೀಡುವುದು) | ಸದರಿ ಆದೇಶದಂತೆ ದಿನಾಂಕ:07.03.2023ರಂದು ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 221 ಜಿಪಸ 2022ರ ಆದೇಶದಲ್ಲಿ ಡಿಸೆಂಬರ್ 2022ರಿಂದ ಮಾರ್ಚ್ 2023ರವರೆಗೆ ಪರಿಷ್ಕರಿಸಲಾದ ಗೌರವಧನವನ್ನು ಬಿಡುಗಡೆ ಮಾಡಲಾಗಿದೆ. (ಪ್ರತಿ ಲಗತ್ತಿಸಿದೆ)<br><br>ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಆದೇಶ ಸಂಖ್ಯೆ:ಕಪಂರಾಆ/ಅಭಿವೃದ್ಧಿ/304/ಸ.ಗೌ.ಧ/2023, ದಿನಾಂಕ:10.07.2023ರಲ್ಲಿ ಏಪ್ರಿಲ್-2023 ರಿಂದ ಜುಲೈ-2023ರವರೆಗೆ ಗೌರವಧನವನ್ನು ಬಿಡುಗಡೆ ಮಾಡಲಾಗಿದೆ. (ಪ್ರತಿ ಲಗತ್ತಿಸಿದೆ) |
| (ಇ) | ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರಿಗೆ ಗೌರವಧನವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆ ಮಾಡಲಾಗುವುದು; (ವಿವರ ನೀಡುವುದು) | ಪರಿಷ್ಕೃತ ಗೌರವಧನವನ್ನು 2023ರ ಜುಲೈ ಮಾಹೆಯವರೆಗೆ ಈಗಾಗಲೇ ಬಿಡುಗಡೆ ಮಾಡಲಾಗಿದ್ದು, ಪ್ರಸ್ತುತ ಬಿಡುಗಡೆಗೆ ಬಾಕಿ ಇರುವುದಿಲ್ಲ.<br>ಮಾಸಿಕ ಗೌರವಧನವನ್ನು ಪ್ರತಿ ಮೂರು ತಿಂಗಳಿಗೊಮ್ಮೆ ಬಿಡುಗಡೆ ಮಾಡಲಾಗುವುದು. |

ಸಂಖ್ಯೆ: ಗ್ರಾಅಪಂರಾ 243 ಜಿಪಸ 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 116 ಜಿಪಸ 2017, ದಿನಾಂಕ:03-05-2017.

**ಪ್ರಸ್ತಾವನೆ:**

ಮೇಲೆ ಓದಲಾದ ಆದೇಶದಲ್ಲಿ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳಿಗೆ ರೂ.3000/-, ಉಪಾಧ್ಯಕ್ಷರುಗಳಿಗೆ ರೂ.2000/- ಹಾಗೂ ಸದಸ್ಯರುಗಳಿಗೆ ರೂ.1000/-ಗಳ ಮಾಸಿಕ ಗೌರವಧನವನ್ನು ನಿಗದಿಪಡಿಸಲಾಗಿತ್ತು. ಪ್ರಸ್ತುತ ಗೌರವಧನವನ್ನು ಪರಿಷ್ಕರಿಸಿ ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳಿಗೆ ರೂ.6,000/-, ಉಪಾಧ್ಯಕ್ಷರುಗಳಿಗೆ ರೂ.4,000/- ಹಾಗೂ ಸದಸ್ಯರುಗಳಿಗೆ ರೂ.2,000/-ಗಳ ಮಾಸಿಕ ಗೌರವಧನವನ್ನು ನಿಗದಿಗೊಳಿಸಲು ತೀರ್ಮಾನಿಸಿದೆ . ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 126 ಜಿಪಸ 2022, ಬೆಂಗಳೂರು ದಿನಾಂಕ:18-12-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳಿಗೆ ಮಾಸಿಕ ರೂ.6,000/-, ಉಪಾಧ್ಯಕ್ಷರುಗಳಿಗೆ ಮಾಸಿಕ ರೂ.4,000/- ಹಾಗೂ ಸದಸ್ಯರುಗಳಿಗೆ ಮಾಸಿಕ ರೂ.2,000/-ಗಳ ಗೌರವಧನವನ್ನುಪರಿಷ್ಕರಿಸಿ ನಿಗದಿಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 909 ವೆಚ್ಚ 06 2022, ದಿನಾಂಕ:18.12.2022 ರನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎಸ್.ಬಾನೊಳ್ಳಿ)
ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.



Generated from eOffice by MADHURI.MAYACHARI, RDPR-Asst2(MM), ASSISTANT 2, RDPR SEC on 05/07/2023 12:18 PM

4. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
5. ಆಯುಕ್ತರು, ಕರ್ನಾಟಕ ಪಂಚಾಯತ್‌ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಬೆಂಗಳೂರು.
6. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ರಾಜಾಜಿನಗರ, ಬೆಂಗಳೂರು.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
8. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9. ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಉಪನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
11. ಜಿಲ್ಲಾ ಖಜಾನಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
12. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನಸೌಧ, ಬೆಂಗಳೂರು.
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
14. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
15. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
16. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
17. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ ಮಾಸಪತ್ರಿಕೆ – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
18. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

ಪ್ರತಿಯನ್ನು:

1. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

*****

ಹೊರಡಿಸಿದೆ 20/12 ದಿನಾಂಕ

ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಇಲಾಖೆ



Generated from eOffice by MADHURI.MAYACHARI, RDPR-Asst2(MM), ASSISTANT 2, RDPR SEC on 05/07/2023 12:18 PM

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿಗೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಡಿಸೆಂಬರ್ 2022 ರಿಂದ ಮಾರ್ಚ್-2023ರವರೆಗಿನ ಅವಧಿಗೆ ಮೂರನೇ/ಅಂತಿಮ ಕಂತಿನ ಗೌರವಧನ ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 116 ಜಿಪಸ 2017, ದಿನಾಂಕ:03-05-2017.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 221 ಜಿಪಸ 2022, ದಿನಾಂಕ:25.05.2022 ಮತ್ತು 17.10.2022.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 126 ಜಿಪಸ 2022, ದಿನಾಂಕ:18.12.2022.
4. ಸರ್ಕಾರದ ಆದೇಶ ಸಂಖ್ಯೆ: FD 615 BRS 2022, ದಿನಾಂಕ:23-02-2023.

**ಪ್ರಸ್ತಾವನೆ:**

ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನ ಬಿಡುಗಡೆ ಮಾಡುವ ಕುರಿತು 2022-23ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ 2515-00-103-0-98-324(2515-00-198-1-11-300)(ಯೋಜನೇತರ) ಅಡಿಯಲ್ಲಿ ರೂ.13693.92 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ. ಮೇಲೆ (1)ರಲ್ಲಿ ಓದಲಾದ ಆದೇಶದನ್ವಯ, ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳಿಗೆ ಮಾಹೆಯಾನ ರೂ.3000/-, ಉಪಾಧ್ಯಕ್ಷರುಗಳಿಗೆ ರೂ.2000/- ಹಾಗೂ ಸದಸ್ಯರುಗಳಿಗೆ ರೂ.1000/-ಗಳ ಗೌರವಧನ ನಿಗದಿಪಡಿಸಲಾಗಿತ್ತು.

ಅದರಂತೆ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಮೇಲೆ(2)ರಲ್ಲಿ ಓದಲಾದ ಆದೇಶಗಳಲ್ಲಿ ಮೊದಲನೇ ಕಂತಿನ ಗೌರವಧನ ಏಪ್ರಿಲ್-2022 ರಿಂದ ಆಗಸ್ಟ್-2022ರವರೆಗಿನ ಅವಧಿಗೆ ರೂ.56,33,55,000/-(ಐವತ್ತಾರು ಕೋಟಿ ಮೂವತ್ತ ಮೂರು ಲಕ್ಷದ ಐವತ್ತೈದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಹಾಗೂ ಸೆಪ್ಟೆಂಬರ್ 2022 ರಿಂದ ನವೆಂಬರ್ 2022ರವರೆಗಿನ ಅವಧಿಗೆ ಎರಡನೇ ಕಂತಿನ ಗೌರವಧನ ರೂ.33,50,18,000/- (ಮೂವತ್ತ ಮೂರು ಕೋಟಿ ಐವತ್ತು ಲಕ್ಷದ ಹದಿನೆಂಟು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಈಗಾಗಲೇ ಬಿಡುಗಡೆಗೊಳಿಸಲಾಗಿದೆ.

ಮೊದಲ ಎರಡು ಕಂತುಗಳಲ್ಲಿ ರೂ.89,83,73,000/-(ಎಂಭತ್ತೊಂಭತ್ತು ಕೋಟಿ ಎಂಭತ್ತೂರು ಲಕ್ಷದ ಎಪ್ಪತ್ತೂರು ಸಾವಿರ ಮಾತ್ರ)ಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದ್ದು, ಪ್ರಸ್ತುತ ಸದರಿ ಲೆಕ್ಕಶೀರ್ಷಿಕೆಯಲ್ಲಿ ರೂ.47,10,19,000/-(ನಲವತ್ತೇಳು ಕೋಟಿ ಹತ್ತು ಲಕ್ಷದ ಹತ್ತೊಂಭತ್ತು ಸಾವಿರ ಮಾತ್ರ)ಗಳ ಅನುದಾನ ಲಭ್ಯವಿರುತ್ತದೆ.

ಮುಂದುವರೆದು, ಮೇಲೆ (3)ರಲ್ಲಿ ಓದಲಾದ ಆದೇಶದಲ್ಲಿ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ಪರಿಷ್ಕರಿಸಿ ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳಿಗೆ ರೂ.6,000/-, ಉಪಾಧ್ಯಕ್ಷರುಗಳಿಗೆ ರೂ.4,000/- ಹಾಗೂ ಸದಸ್ಯರುಗಳಿಗೆ ರೂ.2,000/-ಗಳ ಮಾಸಿಕ ಗೌರವಧನವನ್ನು

ನಿಗದಿಗೊಳಿಸಿ ಆದೇಶಿಸಲಾಗಿದೆ. ಗೌರವಧನ ಪರಿಷ್ಕರಣೆಯಿಂದ ಅವಶ್ಯವಿರುವ ಹೆಚ್ಚುವರಿ ಅನುದಾನ ಬಿಡುಗಡೆಗೊಳಿಸುವಂತೆ, ಆರ್ಥಿಕ ಇಲಾಖೆಯನ್ನು ಕೋರಲಾಗಿತ್ತು.

ಮೇಲೆ (4)ರಲ್ಲಿ ಓದಲಾದ ಆದೇಶದಲ್ಲಿ ಆರ್ಥಿಕ ಇಲಾಖೆಯು, ಗ್ರಾಮ ಪಂಚಾಯಿತಿ ಜನಪ್ರತಿನಿಧಿಗಳ ಗೌರವಧನ ಪಾವತಿಗಾಗಿ ಲೆಕ್ಕ ಶೀರ್ಷಿಕೆ:2515-00-198-1-11-300 ಒಟ್ಟು - ಜಿಲ್ಲಾ ಪರಿಷದ್ ಅಡಿಯಲ್ಲಿ ಕೊರತೆಯುಂಟಾದ ಅನುದಾನವನ್ನು ಲೆಕ್ಕ ಶೀರ್ಷಿಕೆ 2515-00-197-1-10-300-ಒಟ್ಟು - ಜಿಲ್ಲಾ ಪರಿಷದ್ ಅಡಿಯಲ್ಲಿ ಉಳಿತಾಯವಾಗುವ ಒಟ್ಟು ರೂ. 3597.51ಲಕ್ಷಗಳನ್ನು ಪುನರ್ವಿನಿಯೋಗದ ಮೂಲಕ ಒದಗಿಸಿ ಮಂಜೂರಾತಿ ನೀಡಿದೆ. ಇದರಿಂದ, ಪ್ರಸ್ತುತ ಲೆಕ್ಕ ಶೀರ್ಷಿಕೆ:2515-00-198-1-11-300ರಲ್ಲಿ ರೂ.83,07,70,000/- (ಎಂಭತ್ತ ಮೂರು ಕೋಟಿ ಏಳು ಲಕ್ಷದ ಎಪ್ಪತ್ತು ಸಾವಿರಗಳು ಮಾತ್ರ)ಗಳ ಅನುದಾನ ಲಭ್ಯವಿರುತ್ತದೆ.

ಅದರಂತೆ 2022-23ನೇ ಸಾಲಿನ ಆರ್ಥಿಕ ವರ್ಷದಲ್ಲಿ ಮೇಲೆ ಓದಲಾದ (1) ಮತ್ತು (3)ರ ಆದೇಶಗಳನ್ವಯ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಡಿಸೆಂಬರ್ 2022 ರಿಂದ ಮಾರ್ಚ್-2023ರವರೆಗಿನ ಅವಧಿಗೆ ಮೂರನೇ/ಅಂತಿಮ ಕಂತಿನ ಗೌರವಧನವನ್ನು 2022-23ನೇ ಸಾಲಿಗೆ ಲೆಕ್ಕ ಶೀರ್ಷಿಕೆ:2515-00-103-0-98-324(2515-00-198-1-11-300) (ಯೋಜನೇತರ) ರಡಿ ನಿಗಧಿಪಡಿಸಿರುವ ಅನುದಾನದಲ್ಲಿ ರೂ. 82,94,51,675/- (ಎಂಭತ್ತೆರಡು ಕೋಟಿ ತೊಂಭತ್ತನಾಲ್ಕು ಲಕ್ಷದ ಐವತ್ತೊಂದು ಸಾವಿರದ ಆರು ನೂರ ಎಪ್ಪತ್ತೈದು ಮಾತ್ರ)ಗಳನ್ನು ಲಗತ್ತಿಸಲಾದ <u>ಅನುಬಂಧದನ್ವಯ</u> ನಿಗಧಿಪಡಿಸಲಾಗಿರುವಂತೆ ಬಿಡುಗಡೆಗೊಳಿಸಬೇಕಾಗಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 221 ಜಿಪಸ 2022, ಬೆಂಗಳೂರು ದಿನಾಂಕ:07-03-2023.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆರ್ಥಿಕ ವರ್ಷದಲ್ಲಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಡಿಸೆಂಬರ್ 2022 ರಿಂದ ಮಾರ್ಚ್-2023ರವರೆಗಿನ ಅವಧಿಗೆ ಮೂರನೇ/ಅಂತಿಮ ಕಂತಿನ ಗೌರವಧನವನ್ನು 2022-23ನೇ ಸಾಲಿನ ಲೆಕ್ಕ ಶೀರ್ಷಿಕೆ:2515-00-103-0-98-324 (2515-00-198-1-11-300) (ಯೋಜನೇತರ) ರಡಿ ನಿಗಧಿಪಡಿಸಿರುವ ಅನುದಾನದಲ್ಲಿ ರೂ.82,94,51,675/-(ಎಂಭತ್ತೆರಡು ಕೋಟಿ ತೊಂಭತ್ತನಾಲ್ಕು ಲಕ್ಷದ ಐವತ್ತೊಂದು ಸಾವಿರದ ಆರು ನೂರ ಎಪ್ಪತ್ತೈದು ಮಾತ್ರ)ಗಳನ್ನು ಲಗತ್ತಿಸಲಾದ **<u>ಅನುಬಂಧದನ್ವಯ</u>** ಬಿಡುಗಡೆಗೊಳಿಸಿ ಆದೇಶಿಸಿದೆ.

ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಬಿಡುಗಡೆಗೊಳಿಸಿರುವ ಮಾಸಿಕ ಗೌರವಧನದ ಜಿಲ್ಲಾವಾರು ಮೊತ್ತಗಳನ್ನು ಈ ಆದೇಶದೊಂದಿಗೆ ಲಗತ್ತಿಸಿದ **<u>ಅನುಬಂಧದಲ್ಲಿ</u>** ನೀಡಿದೆ. ಜಿಲ್ಲಾವಾರು ಗೌರವಧನದ ಮೊತ್ತಗಳನ್ನು ಜಿಲ್ಲಾ ಪಂಚಾಯತಿಗಳ ಡಿ.ಡಿ.ಓ(ಖಜಾನೆ-2ರ ಡ್ರಾಯಿಂಗ್ ಅಂಡ್ ಡಿಸ್ಬರ್ಸಿಂಗ್ ಕೋಡ್- ಹಣಸೆಳೆಯುವ ಮತ್ತು ಬಟವಾಡೆ ಮಾಡುವ ಕೋಡ್)ಗಳಿಗೆ ಖಜಾನೆ-2 ತಂತ್ರಾಂಶದ ಮೂಲಕ ಅಪ್‌ಲೋಡ್ ಮಾಡಲು ಆದೇಶಿಸಿದೆ.

**<u>ಮಾಸಿಕ ಗೌರವಧನದ ಮೊತ್ತಗಳನ್ನು ಚುನಾಯಿತ ಪ್ರತಿನಿಧಿಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಪಾವತಿಸುವುದು.</u>**

1. ಈ ಆದೇಶದ ಅನುಬಂಧದಲ್ಲಿ ನಮೂದಿಸಿರುವ ಆಯಾ ಜಿಲ್ಲೆಗಳ ಮೊತ್ತಗಳನ್ನು ಜಿಲ್ಲಾ ಪಂಚಾಯತಿಗಳ ಡಿ.ಡಿ.ಓ(ಖಜಾನೆ-2ರ ಡ್ರಾಯಿಂಗ್ ಅಂಡ್ ಡಿಸ್ಬರ್ಸಿಂಗ್ ಕೋಡ್– ಹಣಸೆಳೆಯುವ ಮತ್ತು ಬಟವಾಡೆ ಮಾಡುವ ಕೋಡ್)ಗಳಿಗೆ ಖಜಾನೆ-2 ತಂತ್ರಾಂಶದ ಮೂಲಕ ಅಪ್‌ಲೋಡ್ ಮಾಡಿರುವುದರಿಂದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಖಜಾನೆಯಿಂದ ತಮ್ಮ ಮೊತ್ತಗಳನ್ನು ಸೆಳೆಯುವುದು.
2. ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳ ಸಂಖ್ಯೆಗಳನ್ನು ನಿಖರವಾಗಿ ಗಣನೆಗೆ ತೆಗೆದುಕೊಂಡು ಪ್ರತಿ ಗ್ರಾಮ ಪಂಚಾಯತಿಗೆ ನೀಡಬೇಕಾಗಿರುವ ಮೊತ್ತಗಳನ್ನು ಲೆಕ್ಕ ಹಾಕಿ ಅಂತಹ ಮೊತ್ತಗಳನ್ನು ಗ್ರಾಮ ಪಂಚಾಯತಿಗಳ ಬ್ಯಾಂಕ್ ಉಳಿತಾಯ ಖಾತೆಗಳಿಗೆ ಆರ್.ಟಿ.ಜಿ.ಎಸ್/ಎನ್.ಇ.ಎಫ್.ಟಿ ವಿಧಾನದ ಮೂಲಕ ವರ್ಗಾಯಿಸಿ ಚುನಾಯಿತ ಪ್ರತಿನಿಧಿಗಳಿಗೆ ಮಾಸಿಕ ಗೌರವಧನ ಪಾವತಿಸಲು ಸೂಚನೆಗಳನ್ನು ನೀಡುವುದು.
3. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಮೊತ್ತಗಳನ್ನು ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಡಿಸೆಂಬರ್ 2022 ರಿಂದ ಮಾರ್ಚ್-2023ರವರೆಗಿನ ಗೌರವಧನ ಪಾವತಿಸಲು ಮಾತ್ರ ವಿನಿಯೋಗಿಸುವುದು. ಅನ್ಯ ಉದ್ದೇಶಕ್ಕಾಗಿ ವಿನಿಯೋಗಿಸತಕ್ಕದ್ದಲ್ಲ.
4. ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಈ ಆದೇಶ ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗೆ ಮರು ಬಿಡುಗಡೆಗೊಳಿಸಲು ಕ್ರಮವಹಿಸುವುದು. ಅನುಷ್ಠಾನಾಧಿಕಾರಿಗಳ ಹಂತದಲ್ಲಿ ಗೌರವಧನ ವಿಳಂಬವಾಗಿ ಬಿಡುಗಡೆಗೊಳಿಸಿದಲ್ಲಿ, ಗ್ರಾಮ ಪಂಚಾಯತಿಗಳಿಗೆ ಬಡ್ಡಿಯೊಂದಿಗೆ ಪಾವತಿಸತಕ್ಕದ್ದು ಹಾಗೂ ಕ್ಲುಪ್ತ ಅವಧಿಯೊಳಗೆ ಗೌರವಧನ ಬಿಡುಗಡೆಗೊಳಿಸದಿದ್ದಲ್ಲಿ ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.
5. ನಿಗಧಿತ ಅವಧಿಯೊಳಗೆ ಗೌರವಧನ ಬಿಡುಗಡೆಗೊಳಿಸಿರುವ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸುವುದು ಹಾಗೂ ಗೌರವಧನದ ಅನುದಾನವು Scale based budget ಆಗಿರುವುದರಿಂದ ಆಯಾ ವರ್ಷದ ಅನುದಾನವನ್ನು ಆಯಾ ವರ್ಷದಲ್ಲಿಯೇ ವಿನಿಯೋಗಿಸಬೇಕಾಗಿದ್ದು, ಸದರಿ ಆರ್ಥಿಕ ಸಾಲಿನಲ್ಲಿ ಬಿಡುಗಡೆಯಾದ ಗೌರವಧನಕ್ಕೆ ಸಂಬಂಧಿತ ಯಾವುದೇ ವಿಚಾರಣೆಗಳಿದ್ದಲ್ಲಿ ಬಿಡುಗಡೆಗೊಳಿಸಿದ 15 ದಿನಗಳೊಳಗಾಗಿ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:FD 615 BRS 2022, ದಿನಾಂಕ:23-02-2023 ಹಾಗೂ ಸರ್ಕಾರದ ಆದೇಶ ಸಂಖ್ಯೆ:ಎಫ್ ಡಿ 01 ಟಿಎಫ್‌ಪಿ 2022,

ದಿನಾಂಕ:03.01.2023ರಲ್ಲಿ ಸಂಬಂಧಿಸಿದ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಎಂ. ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ.),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ

ಹೊರಡಿಸಿದೆ ದಿನಾಂಕ
ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿಅಂಡ್‌ಎಸ್‌ಎಸ್ ಎ), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್‌ಆರ್ ಎಸ್ ಎ), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, (ಪಿ.ಬಿ.ನಂ.5329) ಬೆಂಗಳೂರು.
4. ಆಯುಕ್ತರು, ಕರ್ನಾಟಕ ಪಂಚಾಯತ್‌ರಾಜ್ ಆಯುಕ್ತಾಲಯ, ಬೆಂಗಳೂರು
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ನಿರ್ದೇಶಕರು(ಅಭಿವೃದ್ಧಿ), ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
8. ಉಪ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
9. ಜಿಲ್ಲಾ ಖಜಾನಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
10. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನಸೌಧ, ಬೆಂಗಳೂರು.
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
13. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
14. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು
15. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ ಮಾಸಪತ್ರಿಕೆ – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
16. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

******

2022 -23ನೇ ಸಾಲಿನಲ್ಲಿ ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳಿಗೆ ಡಿಸೆಂಬರ್ 2022 ರಿಂದ ಮಾರ್ಚ್-2023ರವರೆಗಿನ ಅವಧಿಗೆ ಮೂರನೇ ಕಂತಿನ ಗೌರವಧನವನ್ನು ಜಿಲ್ಲಾವಾರು ಬಿಡುಗಡೆ ಮಾಡಿದ ವಿವರದ ಅನುಬಂಧ

ರೂ.ಗಳಲ್ಲಿ

| ಕ್ರ.ಸಂ. | ಜಿಲ್ಲೆಯಹೆಸರು | ಗ್ರಾಮ ಪಂಚಾಯಿತಿ ಸಂಖ್ಯೆ | ಅಧ್ಯಕ್ಷರು | ಉಪಾಧ್ಯಕ್ಷರು | ಸದ್ಯಸರು | ಅಧ್ಯಕ್ಷರು ಗೌರವಧನ | ಉಪಾಧ್ಯಕ್ಷರು ಗೌರವಧನ | ಸದ್ಯಸರು ಗೌರವಧನ | ಬಿಡುಗಡೆ ಮಾಡಲಾದ ಒಟ್ಟು ಮೊತ್ತ |
|---|---|---|---|---|---|---|---|---|---|
| 1 | ಬಾಗಲಕೋಟೆ | 195 | 190 | 190 | 2763 | 4237000 | 2824669 | 20537904 | 27599573 |
| 2 | ಬಳ್ಳಾರಿ | 100 | 100 | 100 | 1769 | 2230000 | 1486668 | 13149313 | 16865981 |
| 3 | ಬೆಳಗಾವಿ | 500 | 500 | 499 | 7513 | 11150000 | 7418473 | 55845556 | 74414030 |
| 4 | ಬೆಂಗಳೂರು ನಗರ | 86 | 83 | 84 | 1826 | 1850900 | 1248801 | 13573005 | 16672706 |
| 5 | ಬೆಂಗಳೂರು ಗ್ರಾಮಾಂತರ | 101 | 101 | 101 | 1590 | 2252300 | 1501535 | 11818772 | 15572607 |
| 6 | ಬೀದರ್ | 185 | 185 | 185 | 2883 | 4125500 | 2750336 | 21429887 | 28305723 |
| 7 | ಚಾಮರಾಜನಗರ | 130 | 130 | 130 | 1911 | 2899000 | 1932668 | 14204826 | 19036494 |
| 8 | ಚಿಕ್ಕಬಳ್ಳಾಪುರ | 157 | 157 | 157 | 2511 | 3501100 | 2334069 | 18664740 | 24499909 |
| 9 | ಚಿಕ್ಕಮಗಳೂರು | 226 | 226 | 226 | 1875 | 5039800 | 3359870 | 13937231 | 22336901 |
| 10 | ಚಿತ್ರದುರ್ಗ | 189 | 189 | 189 | 3043 | 4214700 | 2809803 | 22619197 | 29643700 |
| 11 | ದಕ್ಷಿಣಕನ್ನಡ | 223 | 223 | 223 | 2843 | 4972900 | 3315270 | 21132559 | 29420729 |
| 12 | ದಾವಣಗೆರೆ | 194 | 193 | 193 | 2258 | 4303900 | 2869269 | 16784143 | 23957312 |
| 13 | ಧಾರವಾಡ | 144 | 143 | 143 | 1757 | 3188900 | 2125935 | 13060115 | 18374950 |
| 14 | ಗದಗ | 122 | 122 | 122 | 1525 | 2720600 | 1813735 | 11335615 | 15869950 |
| 15 | ಹಾಸನ | 267 | 257 | 257 | 3017 | 5731100 | 3820737 | 22425934 | 31977771 |
| 16 | ಹಾವೇರಿ | 223 | 220 | 220 | 2724 | 4906000 | 3270670 | 20248010 | 28424679 |
| 17 | ಕಲಬುರಗಿ | 261 | 259 | 259 | 3833 | 5775700 | 3850470 | 28491417 | 38117587 |
| 18 | ಕೊಡಗು | 104 | 104 | 104 | 1047 | 2319200 | 1546135 | 7782550 | 11647885 |

| | | | | | | | | | |
|---|---|---|---|---|---|---|---|---|---|
| 19 | ಕೋಲಾರ | 154 | 152 | 152 | 2420 | 3389600 | 2259735 | 17988320 | 23637655 |
| 20 | ಕೊಪ್ಪಳ | 153 | 153 | 153 | 2453 | 3411900 | 2274602 | 18233615 | 23920117 |
| 21 | ಮಂಡ್ಯ | 233 | 231 | 233 | 3373 | 5151300 | 3463936 | 25072150 | 33687386 |
| 22 | ಮೈಸೂರು | 256 | 250 | 250 | 3735 | 5575000 | 3716670 | 27762965 | 37054635 |
| 23 | ರಾಯಚೂರು | 179 | 177 | 177 | 3124 | 3947100 | 2631402 | 23221286 | 29799788 |
| 24 | ರಾಮನಗರ | 126 | 122 | 122 | 1699 | 2720600 | 1813735 | 12628990 | 17163325 |
| 25 | ಶಿವಮೊಗ್ಗ | 262 | 251 | 251 | 2197 | 5597300 | 3731537 | 16330718 | 25659555 |
| 26 | ತುಮಕೂರು | 330 | 330 | 330 | 4029 | 7359000 | 4906004 | 29948323 | 42213327 |
| 27 | ಉಡುಪಿ | 155 | 154 | 154 | 2090 | 3434200 | 2289469 | 15535367 | 21259036 |
| 28 | ಉತ್ತರಕನ್ನಡ | 229 | 227 | 227 | 2662 | 5062100 | 3374736 | 19787152 | 28223988 |
| 29 | ವಿಜಯಪುರ | 211 | 206 | 206 | 3429 | 4593800 | 3062536 | 25488409 | 33144745 |
| 30 | ವಿಜಯನಗರ | 137 | 136 | 136 | 2138 | 3032800 | 2021868 | 15892160 | 20946829 |
| 31 | ಯಾದಗಿರಿ | 122 | 122 | 122 | 2081 | 2720600 | 1813735 | 15468468 | 20002803 |
| ಒಟ್ಟು | | 5954 | 5893 | 5895 | 82118 | 131413900 | 87639079 | 610398696 | 829451675 |

7/3/23

(ಎಂ.ಎಂ. ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ.),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ

07/03

## ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ನಡವಳಿಗಳು

**ವಿಷಯ:** 2023-24 ನೇ ಸಾಲಿಗೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಏಪ್ರಿಲ್- 2023 ರಿಂದ ಜುಲೈ 2023 ರ ವರೆಗಿನ ಅವಧಿಗೆ ಮೊದಲನೇ ಕಂತಿನ ಗೌರವಧನ ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:1.** 2023-24 ನೇ ಸಾಲಿನ ಆಯವ್ಯಯದನ್ವಯ ಆರ್ಥಿಕ ಇಲಾಖೆಯು ನಿಗದಿಪಡಿಸಿದಂತೆ.

**2.** ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 126 ಜಿಪಸ 2022, ದಿನಾಂಕ:18.12.2022

******

**ಪ್ರಸ್ತಾವನೆ:**

ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನ ಬಿಡುಗಡೆ ಮಾಡುವ ಸಂಬಂಧ (1) ರಲ್ಲಿ 2023-24 ನೇ ಆರ್ಥಿಕ ಸಾಲಿನಲ್ಲಿ ಲೆಕ್ಕಶೀರ್ಷಿಕೆ: 2515-00-198-1-11-300ರಡಿ ಆಯವ್ಯಯದಲ್ಲಿ ರೂ.27378.24 ಲಕ್ಷಗಳ ಅನುದಾನವನ್ನು ಕಾಯ್ದಿರಿಸಲಾಗಿದೆ. ಓದಲಾದ (2) ರ ಆದೇಶದನ್ವಯ, ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳಿಗೆ ಮಾಹೆಯಾನ ರೂ. 6000/-, ಉಪಾಧ್ಯಕ್ಷರುಗಳಿಗೆ ರೂ.4000/- ಹಾಗೂ ಸದಸ್ಯರುಗಳಿಗೆ ರೂ.2000/-ಗಳ ಗೌರವಧನ ನಿಗದಿಪಡಿಸಲಾಗಿದೆ.

ಅದರಂತೆ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಏಪ್ರಿಲ್- 2023 ರಿಂದ ಜುಲೈ 2023 ರ ವರೆಗಿನ ಅವಧಿಗೆ ಮೊದಲನೇ ಕಂತಿನ ಗೌರವಧನವನ್ನು 2023-24ನೇ ಸಾಲಿಗೆ ಲೆಕ್ಕ ಶೀರ್ಷಿಕೆ: 2515-00-198-1-11-300ರಡಿ ನಿಗದಿಪಡಿಸಿರುವ ಅನುದಾನದಲ್ಲಿ ರೂ. **89,27,84,000/-** (ರೂ. ಎಂಬತ್ತೊಂಬತ್ತು ಕೋಟಿ ಇಪ್ಪತ್ತೇಳು ಲಕ್ಷದ ಎಂಬತ್ತನಾಲ್ಕು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಲಗತ್ತಿಸಲಾದ ಅನುಬಂಧದನ್ವಯ ನಿಗದಿಪಡಿಸಲಾಗಿರುವಂತೆ ಬಿಡುಗಡೆಗೊಳಿಸಬೇಕಾಗಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕಪಂರಾಆ/ಅಭಿವೃದ್ಧಿ./304/ಸ.ಗೌ.ಧ/2023.**

**ಬೆಂಗಳೂರು ದಿನಾಂಕ: 10-07-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2023-24ನೇ ಸಾಲಿಗೆ ಆರ್ಥಿಕ ವರ್ಷದ ಏಪ್ರಿಲ್- 2023 ರಿಂದ ಜುಲೈ 2023 ರವರೆಗಿನ ಅವಧಿಗೆ ಮಾತ್ರ ಅನ್ವಯಿಸುವಂತೆ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಾದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಲೆಕ್ಕ ಶೀರ್ಷಿಕೆ: 2515-00-198-1-11-300ರಡಿ ಲಭ್ಯವಿರುವ ರೂ: 27378.24 ಲಕ್ಷಗಳ ಅನುದಾನದಲ್ಲಿ ರೂ. **89,27,84,000/-** (ರೂ. ಎಂಬತ್ತೊಂಬತ್ತು ಕೋಟಿ ಇಪ್ಪತ್ತೇಳು ಲಕ್ಷದ ಎಂಬತ್ತನಾಲ್ಕು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಲಗತ್ತಿಸಲಾದ ಅನುಬಂಧದನ್ವಯ ಗೌರವಧನ ಬಿಡುಗಡೆಗೊಳಿಸಿ ಆದೇಶಿಸಿದೆ.

ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಬಿಡುಗಡೆಗೊಳಿಸಿರುವ ಮಾಸಿಕ ಗೌರವಧನದ ಜಿಲ್ಲಾವಾರು ಮೊತ್ತಗಳನ್ನು ಈ ಆದೇಶದೊಂದಿಗೆ ಲಗತ್ತಿಸಿದ ಅನುಬಂಧದಲ್ಲಿ ನೀಡಿದೆ. ಜಿಲ್ಲಾವಾರು ಗೌರವ ಧನದ ಮೊತ್ತಗಳನ್ನು ಜಿಲ್ಲಾ ಪಂಚಾಯತಿಗಳ ಡಿ.ಡಿ.ಓ (ಖಜಾನೆ-2ರ ಡ್ರಾಯಿಂಗ್ ಅಂಡ್ ಡಿಸ್ಬರ್ಸಿಂಗ್ ಕೋಡ್ - ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಕೋಡ್)ಕೋಡ್‌ಗಳಿಗೆ ಖಜಾನೆ-2 ತಂತ್ರಾಂಶದ ಮೂಲಕ ಅಪ್‌ಲೋಡ್ ಮಾಡಲು ಆದೇಶಿಸಿದೆ.

**ಮಾಸಿಕ ಗೌರವಧನದ ಮೊತ್ತಗಳನ್ನು ಚುನಾಯಿತ ಪ್ರತಿನಿಧಿಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಪಾವತಿಸುವುದು.**

1. ಈ ಆದೇಶದ ಅನುಬಂಧದಲ್ಲಿ ನಮೂದಿಸಿರುವ ಆಯಾ ಜಿಲ್ಲೆಗಳ ಮೊತ್ತಗಳನ್ನು ಜಿಲ್ಲಾ ಪಂಚಾಯತಿಗಳ ಡಿ.ಡಿ.ಓ(ಖಜಾನೆ-2ನ ಡ್ರಾಯಿಂಗ್ ಅಂಡ್ ಡಿಸ್ಬರ್ಸಿಂಗ್ ಕೋಡ್)ಗಳಿಗೆ ಅಪ್‌ಲೋಡ್ ಮಾಡಿರುವುದರಿಂದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಖಜಾನೆಯಿಂದ ತಮ್ಮ ಮೊತ್ತಗಳನ್ನು ಸೆಳೆಯುವುದು.

2. ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳ ಸಂಖ್ಯೆಗಳನ್ನು ನಿಖರವಾಗಿ ಗಣನೆಗೆ ತೆಗೆದುಕೊಂಡು ಪ್ರತಿ ಗ್ರಾಮ ಪಂಚಾಯತಿಗೆ ನೀಡಬೇಕಾಗಿರುವ ಮೊತ್ತಗಳನ್ನು ಲೆಕ್ಕಹಾಕಿ ಅಂತಹ ಮೊತ್ತಗಳನ್ನು ಗ್ರಾಮ ಪಂಚಾಯತಿಗಳ ಬ್ಯಾಂಕ್ ಉಳಿತಾಯ ಖಾತೆಗಳಿಗೆ ಆರ್.ಟಿ.ಜಿ.ಎಸ್/ ಎನ್.ಇ.ಎಫ್.ಟಿ ವಿಧಾನದ ಮೂಲಕ ವರ್ಗಾಯಿಸಿ ಚುನಾಯಿತ ಪ್ರತಿನಿಧಿಗಳಿಗೆ ಮಾಸಿಕ ಗೌರವಧನ ಪಾವತಿಸಲು ಸೂಚನೆಗಳನ್ನು ನೀಡುವುದು.

3. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಮೊತ್ತಗಳನ್ನು ಗ್ರಾಮ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳಿಗೆ ಏಪ್ರಿಲ್- 2023 ರಿಂದ ಜುಲೈ 2023 ರವರೆಗಿನ ಗೌರವಧನ ಪಾವತಿಸಲು ಮಾತ್ರ ವಿನಿಯೋಗಿಸುವುದು. ಅನ್ಯ ಉದ್ದೇಶಕ್ಕಾಗಿ ವಿನಿಯೋಗಿಸತಕ್ಕದ್ದಲ್ಲ.

4. ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಈ ಆದೇಶ ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗೆ ಮರುಬಿಡುಗಡೆಗೊಳಿಸಲು ಕ್ರಮವಹಿಸುವುದು. ಅನುಷ್ಠಾನಾಧಿಕಾರಿಗಳ ಹಂತದಲ್ಲಿ ಗೌರವಧನ ವಿಳಂಬವಾಗಿ ಬಿಡುಗಡೆಗೊಳಿಸಿದಲ್ಲಿ, ಗ್ರಾಮ ಪಂಚಾಯತಿಗಳಿಗೆ ಬಡ್ಡಿಯೊಂದಿಗೆ ಪಾವತಿಸತಕ್ಕದ್ದು ಹಾಗೂ ಕ್ಲುಪ್ತ ಅವಧಿಯೊಳಗೆ ಗೌರವಧನ ಬಿಡುಗಡೆಗೊಳಿಸದಿದ್ದಲ್ಲಿ ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

5. ನಿಗದಿತ ಅವಧಿಯೊಳಗೆ ಗೌರವಧನ ಬಿಡುಗಡೆಗೊಳಿಸಿರುವ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸುವುದು ಹಾಗೂ ಗೌರವಧನದ ಅನುದಾನವು Scale based budget ಆಗಿರುವುದರಿಂದ ಆಯಾ ವರ್ಷದ ಅನುದಾನವನ್ನು ಆಯಾ ವರ್ಷದಲ್ಲಿಯೇ ವಿನಿಯೋಗಿಸಬೇಕಾಗಿದ್ದು, ಸದರಿ ಆರ್ಥಿಕ ಸಾಲಿನಲ್ಲಿ ಬಿಡುಗಡೆಯಾದ ಗೌರವಧನಕ್ಕೆ ಸಂಬಂಧಿತ ಯಾವುದೇ ವಿಚಾರಣೆಗಳಿದ್ದಲ್ಲಿ ಬಿಡುಗಡೆಗೊಳಿಸಿದ 15 ದಿನಗಳೊಳಗಾಗಿ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:FD 615 BRS 2022, ದಿನಾಂಕ:23.02.2023 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಎಫ ಡಿ 01 ಟಿಎಫ್‌ಪಿ 2022 ದಿನಾಂಕ: 03.01.2023ರಲ್ಲಿ ಸಂಬಂಧಿಸಿದ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

**(ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,**

**ಗ್ರಾ.ಅ & ಪಂ.ರಾ ಇಲಾಖೆ ಇವರಿಂದ ಟಿಪ್ಪಣಿ ಅನುಮೋದಿಸಲ್ಪಟ್ಟಿದೆ)**

ಆಯುಕ್ತರು
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು

**ಇವರಿಗೆ**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಆಯುಕ್ತರು, ಕರ್ನಾಟಕ ಪಂಚಾಯತ್‌ರಾಜ್ ಆಯುಕ್ತಾಲಯ, ಬೆಂಗಳೂರು
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ನಿರ್ದೇಶಕರು(ಅಭಿವೃದ್ಧಿ), ಕರ್ನಾಟಕ ಪಂಚಾಯತ್‌ರಾಜ್ ಆಯುಕ್ತಾಲಯ, ಬೆಂಗಳೂರು
8. ಉಪ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
9. ಜಿಲ್ಲಾ ಖಜಾನಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
10. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ, ಬೆಂಗಳೂರು.
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು - (ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
13. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
14. ಗಣಕ ಕೋಶ - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು
15. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆ – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
16. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.